**ಮಾನ್ಯವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಪ್ರತಾಪ್ ಸಿಂಹನಾಯಕ್.ಕೆ ಇವರು ರಾಜ್ಯದಲ್ಲಿ ಹಿಂದೂ ಧಾರ್ಮಿಕ ಹಾಗೂ ಧರ್ಮಾದಾಯ ದತ್ತಿ ಇಲಾಖೆ ವ್ಯಾಪ್ತಿಯಲ್ಲಿ ನೋಂದಾಯಿತ 'ಎ' ದರ್ಜೆ ಮತ್ತು 'ಬಿ' ದರ್ಜೆ ದೇವಸ್ಥಾನಗಳಿಂದ ಸರ್ಕಾರಕ್ಕೆ ನೂರಾರು ಕೋಟಿ ಆದಾಯ ಬರುತ್ತಿದ್ದು, ಸದರಿ ದೇವಾಲಯಗಳಲ್ಲಿ ಭಕ್ತರಿಗೆ ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸದಿರುವುದು ಹಾಗೂ ದೇವಾಲಯಗಳ ಭದ್ರತೆ ಮತ್ತು ಸುರಕ್ಷತೆಗೆ ಸರ್ಕಾರ ಸೂಕ್ತ ಕ್ರಮ ವಹಿಸದಿರುವ ಗಂಭೀರ ಸಮಸ್ಯೆ ಕುರಿತು' ನಿಯಮ 72ರ ಗಮನ ಸೆಳೆಯುವರ ಸೂಚನೆಗೆ ಸಾರಿಗೆ ಮತ್ತು ಮುಜರಾಯಿ ಸಚಿವರ ಉತ್ತರ:-**

**ಉತ್ತರ:**

- ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿ ಒಟ್ಟು 205 ಎ ಪ್ರವರ್ಗ, 193 ಬಿ ಪ್ರವರ್ಗ ಹಾಗೂ 34,165 ಸಿ ಪ್ರವರ್ಗದ ಅಧಿಸೂಚಿತ ಸಂಸ್ಥೆಗಳು ಇರುತ್ತವೆ. ಈ ಸಂಸ್ಥೆಗಳಲ್ಲಿ ಬರುವ ಮೊತ್ತವನ್ನು ಆಯಾ ದೇವಾಲಯಗಳಿಗೆ ಉಪಯೋಗಿಸಲಾಗುವುದು ಹಾಗೂ ಹೆಚ್ಚುವರಿ ಹಣವನ್ನು ಆಯಾ ದೇವಾಲಯದ ಹೆಸರಿನಲ್ಲಿ ಠೇವಣಿ ಇರಿಸಲಾಗುವುದು, ಆದರೆ **ಅಧಿಸೂಚಿತ ಸಂಸ್ಥೆಗಳಲ್ಲಿ ಸಂಗ್ರಹವಾಗುವ ಮೊತ್ತವನ್ನು ಸರ್ಕಾರಕ್ಕೆ ಜಮಾ ಮಾಡಲಾಗುವುದಿಲ್ಲ.** ಆದರೆ ಸದರಿ ದೇವಾಲಯಗಳಲ್ಲಿ ಸಂಗ್ರಹವಾಗುವ ಆದಾಯವನ್ನು ಆಯಾಯ ದೇವಾಲಯಗಳ ಖಾತೆಗೆ ಜಮಾ ಮಾಡಲಾಗುತ್ತದೆ. ಇದನ್ನು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ 1997ರ ಕಾಯ್ದೆಯ ಕಲಂ 36(1) ರಡಿಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಗೊಂಡ ಆಯವ್ಯಯದನ್ವಯ ಆಯಾಯ ದೇವಾಲಯದ ಆದಾಯವನ್ನು ಆಯಾಯಾ ದೇವಾಲಯದ ನಿತ್ಯ ಕಟ್ಲೆ, ಹೆಚ್ಚುಕಟ್ಲೆ, ಜಾತ್ರೆ, ಹಬ್ಬಗಳು, ಸಿಬ್ಬಂದಿ ವೆಚ್ಚ ಹಾಗೂ ಅಭಿವೃದ್ಧಿ ಕಾರ್ಯಗಳು ಮತ್ತು ನಿರ್ವಹಣೆಗೆ ಬಳಸಲಾಗುತ್ತದೆ.

- ಧಾರ್ಮಿಕ ದತ್ತಿ ಇಲಾಖಾ ಅಧಿಸೂಚಿತ ದೇವಾಲಯಗಳ ಭದ್ರತೆ ಮತ್ತು ಸುರಕ್ಷತೆಗಾಗಿ ರಾಜ್ಯದಲ್ಲಿ ಹಿಂದೂ ಧಾರ್ಮಿಕ ಹಾಗೂ ಧರ್ಮಾದಾಯ ದತ್ತಿ ಇಲಾಖೆ ವ್ಯಾಪ್ತಿಯಲ್ಲಿ ನೋಂದಾಯಿತ 'ಎ' ದರ್ಜೆ ಮತ್ತು 'ಬಿ' ದರ್ಜೆ ದೇವಸ್ಥಾನಗಳಲ್ಲಿ ಭಕ್ತಾದಿಗಳು ಹಾಗೂ ಸಾರ್ವಜನಿಕರಿಗಾಗಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸುತ್ತೋಲೆ ಸಂಖ್ಯೆ:ಸಿ.ಎನ್.ಆರ್1/ಸಿಆರ್/346/2010-11, ದಿನಾಂಕ:22.03.2011ರಲ್ಲಿಯೇ 31 ಅಂಶಗಳನ್ನು ಒಳಗೊಂಡಂತೆ ಹೊರಡಿಸಲಾಗಿರುತ್ತದೆ. ಅದರಂತೆ ಭಕ್ತಾದಿಗಳಿಗೆ ಕುಡಿಯುವ ನೀರು, ನೆರಳಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ, ಹೈಮಾಸ್ಕ್ ಲ್ಯಾಂಪ್ ಅಳವಡಿಕೆ, ಭದ್ರತಾ ವ್ಯವಸ್ಥೆಗಳನ್ನು ಕಲ್ಪಿಸಲಾಗಿರುತ್ತದೆ.
- 65 ವರ್ಷದ ತುಂಬಿದ ಹಿರಿಯ ನಾಗರೀಕರಿಗೆ ಹಾಗೂ ವಿಶೇಷ ಚೇತನರಿಗೆ ಮತ್ತು 1 ವರ್ಷದೊಳಗೆ ಇರುವ ಚಿಕ್ಕಮಕ್ಕಳನ್ನು ಹೊಂದಿರುವ ತಾಯಂದಿರಿಗೆ ದೇವಾಲಯಗಳಲ್ಲಿ ನೇರವಾಗಿ ದೇವರ ದರ್ಶನ ಸೌಲಭ್ಯ ಒದಗಿಸಲು ಆಯುಕ್ತರ ಸುತ್ತೋಲೆ ಸಂಖ್ಯೆ:ADM/misc/270/2023, E-office 110309, ದಿನಾಂಕ:21.06.2023 ಮತ್ತು ದಿನಾಂಕ:31.01.2024 ರಲ್ಲಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.
- ಧಾರ್ಮಿಕ ದತ್ತಿ ಇಲಾಖಾ ಅಧಿಸೂಚಿತ ದೇವಾಲಯಗಳಿಗೆ ಬರುವ ಭಕ್ತಾದಿಗಳ ಅನುಕೂಲಕ್ಕಾಗಿ ಮಕ್ಕಳಿಗೆ ಹಾಲುಣಿಸುವ ತಾಯಂದಿರಿಗೆ ಪ್ರತ್ಯೇಕ ಕ್ಯಾಬಿನ್/ಕೊಠಡಿ ನಿರ್ಮಿಸಲು ಆಯುಕ್ತರ ಸುತ್ತೋಲೆ ಸಂಖ್ಯೆ:ADM-11/misc/02/2022-23, ದಿನಾಂಕ:22.08.2023ರಂದು ಹೊರಡಿಸಲಾಗಿರುತ್ತದೆ.
- ಅಧಿಸೂಚಿತ ದೇವಾಲಯಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಅರ್ಚಕರು/ನೌಕರರಿಗೆ 2024ನೇ ಸಾಲಿನ ಜೂನ್ ಮಾಹೆ ನಂತರ ಈ ಕೆಳಕಂಡಂತೆ ಸೌಲಭ್ಯಗಳನ್ನು ಮಂಜೂರು ಮಾಡಲಾಗಿದೆ.
    1. ಅರ್ಚಕರಿಗೆ ತಸ್ತಿಕ್/ವರ್ಷಾಸನ ಹಣವನ್ನು ನೇರವಾಗಿ ಅರ್ಚಕರ ಖಾತೆಗೆ ಜಮಾ ಮಾಡಲು (ಡಿ.ಬಿ.ಟಿ) ಪೋರ್ಟಲ್ ಹಾಗೂ ಮೊಬೈಲ್ ಆಪ್ ಅಭಿವೃದ್ಧಿ ಪಡಿಸಲಾಗಿದೆ.
    2. ಅರ್ಚಕ ನೌಕರರ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ಈ ವರ್ಷದಿಂದಲೇ ನೀಡಲು ಮಂಜೂರಾತಿ ನೀಡಲಾಗಿದೆ.

3. ಸಿ ವರ್ಗದ ಅರ್ಚಕ/ನೌಕರರು ಹಾಗೂ ಅವರ ಕುಟುಂಬದ ಒಬ್ಬರು ಸದಸ್ಯರಿಗೆ (ಒಟ್ಟು ವರ್ಷದಲ್ಲಿ 1,200 ಜನರಿಗೆ) ಭಾರತ್ ಗೌರವ್ ಕಾಶಿ ಯಾತ್ರೆ ಹಾಗೂ ದಕ್ಷಿಣ ಭಾರತ ಯಾತ್ರೆಗೆ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.
4. ಸಿ ವರ್ಗದ ಅನುವಂಶಿಕ ಅರ್ಚಕರಿಗೆ ವಯಸ್ಸಾಗಿದ್ದು ಹಾಗೂ ಅನಾರೋಗ್ಯದ ನಿಮಿತ್ತ ಪೂಜೆ ಮಾಡಲು ಅಶಕ್ತರಾಗಿದ್ದರೆ ಅವರ ಅನುವಂಶಿಕ ಹಕ್ಕು (ನೇಮಕಾತಿ) ವರ್ಗಾಯಿಸಲು ಸಂಬಂಧಪಟ್ಟ ತಹಶೀಲ್ದಾರರಿಗೆ ಅಧಿಕಾರ ನೀಡಿ ಆದೇಶಿಸಲಾಗಿದೆ.
5. ಸೇವೆಯಲ್ಲಿರುವಾಗ ಮರಣ ಹೊಂದಿದ ನೌಕರರಿಗೆ ರೂ 2.00 ಲಕ್ಷ ಪರಿಹಾರ ನೀಡಲು ಆದೇಶಿಸಲಾಗಿದೆ.

- ದೇವಾಲಯಗಳ ಭದ್ರತೆ ಮತ್ತು ಸುರಕ್ಷತೆಗಾಗಿ ಅವಶ್ಯವಿರುವ ಕಡೆ ಸಿ.ಸಿ.ಟಿ.ವಿ ಗಳನ್ನು ಅಳವಡಿಸಲಾಗಿರುತ್ತದೆ. ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು ದೇವಾಲಯಗಳ ಭದ್ರತೆ ಮತ್ತು ಸುರಕ್ಷತೆ ಬಗ್ಗೆ ಕ್ರಮವಹಿಸಲಾಗಿರುತ್ತದೆ.

**ಸಂಖ್ಯೆ: ಕಂಇ 27 ಮುಸಪ್ರ 2024**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು